## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 674
2. ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 19.09.2022
4. ಉತ್ತರಿಸಬೇಕಾದ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಮಂಡ್ಯ ನಗರದ ಕ್ಯಾನ್ಸರ್ ಆಸ್ಪತ್ರೆ ಮಂಡ್ಯದ ಮಿಮ್ಸ್ ವ್ಯಾಪ್ತಿಗೆ ಸೇರುತ್ತದೆಯೇ; | ಹೌದು. |
| ಆ) | ಕ್ಯಾನ್ಸರ್ ಆಸ್ಪತ್ರೆ ಪ್ರಾರಂಭವಾದ ವರ್ಷ ಯಾವುವು; ಎಲ್ಲಾ ರೀತಿಯ ಕ್ಯಾನ್ಸರ್ ರೋಗಿಗಳಿಗೆ ಇಲ್ಲಿ ಚಿಕಿತ್ಸೆ ಲಭ್ಯವಿದೆಯೇ; | ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯ ಅಧೀನದಲ್ಲಿ ಮಂಡ್ಯ ನಗರದಲ್ಲಿ ಫೆರಿಫೆರಲ್ ಕ್ಯಾನ್ಸರ್ ಕೇಂದ್ರವನ್ನು 1994 ರಲ್ಲಿ ಪ್ರಾರಂಭಿಸಲಾಗಿರುತ್ತದೆ. ನಂತರ ಸದರಿ ಫೆರಿಫೆರಲ್ ಕ್ಯಾನ್ಸರ್ ಕೇಂದ್ರವನ್ನು ದಿ:31.01.2007 ರಂದು ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಅಧೀನಕ್ಕೆ ಒಳಪಡಿಸಲಾಗಿರುತ್ತದೆ. ಸದರಿ ಕ್ಯಾನ್ಸರ್ ಕೇಂದ್ರದಲ್ಲಿ ರೇಡಿಯೋಥೆರಫಿ ಚಿಕಿತ್ಸಾ ಸೌಲಭ್ಯ ಲಭ್ಯವಿರುತ್ತದೆ. |
| ಇ) | ರೋಗಿಗಳನ್ನು ತಪಾಸಣೆಗೆ ಹಾಗೂ ಚಿಕಿತ್ಸೆಗೆ ಒಳಪಡಿಸುವ ಎಲ್ಲಾ ರೀತಿಯ ಯಂತ್ರಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತದೆಯೇ; | Surgical Oncology, Pallaiative Care, Chemotheapy ಚಿಕಿತ್ಸೆಗೆ ಸಂಬಂಧಿಸಿದ ಯಂತ್ರಗಳು ಕಾರ್ಯನಿರ್ವಹಿಸುತ್ತಿವೆ. |
| ಈ) | ಸದರಿ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಹೌದು. |
| ಉ) | ಹಾಗಾದಲ್ಲಿ, ಯಾವ ಕಾಲಮಿತಿಯಲ್ಲಿ ಸದರಿ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಲಾಗುವುದು? | ಕೇಂದ್ರ ಸರ್ಕಾರದ ಸಹಯೋಗದೊಂದಿಗೆ National Programme for Prevention and Control of Cancer, Diabetes, Cardiovasculaor Diseases and Stroke (NPCDCS) ಯೋಜನೆಯಡಿ ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿರುವ ಹಳೆಯದಾದ ಫೆರಿಫೆರಲ್ ಕ್ಯಾನ್ಸರ್ ಕೇಂದ್ರವನ್ನು ರೂ.4500.00 ಲಕ್ಷಗಳ ಅನಾವರ್ತಕ ವೆಚ್ಚ ಹಾಗೂ ರೂ.1118.00 ಲಕ್ಷಗಳ ಆವರ್ತಕ ವೆಚ್ಚಗಳನ್ನೊಳಗೊಂಡಂತೆ ಒಟ್ಟಾರೆ ಅಂದಾಜು ವೆಚ್ಚ ರೂ.5618.00 ಲಕ್ಷಗಳ ಮೊತ್ತದಲ್ಲಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಗೆ ಮಂಜೂರಾತಿ ನೀಡಿ ಸರ್ಕಾರಿ ಆದೇಶ ಸಂಖ್ಯೆ:ಆಕುಕ 228 ಎಂಪಿಎಸ್ 2016, ದಿ:21.03.2017 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.<br><br>ಮುಂದುವರೆದು, ರೂ.4500.00 ಲಕ್ಷಗಳ ಅನಾವರ್ತಕ ವೆಚ್ಚದಲ್ಲಿ ಉಪಕರಣಗಳಿಗೆ ರೂ.3300.00 ಲಕ್ಷಗಳು ಹಾಗೂ ಸಿವಿಲ್ ಕಾಮಗಾರಿಗೆ ರೂ.1200.00 ಲಕ್ಷಗಳನ್ನು ನಿಗದಿಪಡಿಸಲಾಗಿರುತ್ತದೆ. ಇದರಲ್ಲಿ ಕೇಂದ್ರ ಸರ್ಕಾರದ ಪಾಲು ಶೇ.60 ಹಾಗೂ ರಾಜ್ಯ ಸರ್ಕಾರದ ಪಾಲು ಶೇ.40 ರಷ್ಟಾಗಿರುತ್ತದೆ. |



Generated from eOffice by DR.K SUDHAKAR, MED-MIN(SK), MINISTER, MEDICAL EDUCATION SEC on 15/09/2022 07:22 PM

| | | |
|---|---|---|
| | | ಈ ಕಾಮಗಾರಿಗೆ ಇದುವರೆವಿಗೂ ಕೇಂದ್ರ ಮತ್ತು ರಾಜ್ಯದ ಪಾಲು ಸೇರಿ ಒಟ್ಟಾರೆ ರೂ.30.02 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.<br><br>ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿರುವ ಟರ್ಷಿಯರಿ ಕ್ಯಾನ್ಸರ್ ಕೇರ್ ಸೆಂಟರ್ ಕೇಂದ್ರವನ್ನು ಮೇಲ್ದರ್ಜೆಗೇರಿಸುವ ಸಂಬಂಧ ಕಾಮಗಾರಿಯು ಶೇ.95 ರಷ್ಟು ಭಾಗ ಮುಗಿದಿರುತ್ತದೆ. ವಿದ್ಯುತ್ ಪರಿಕರಗಳನ್ನು ಅಳವಡಿಸುವ ಕೆಲಸ ಬಾಕಿ ಇರುತ್ತದೆ. ರೇಡಿಯೋಥೆರಫಿ ವಿಭಾಗಕ್ಕೆ ಬೇಕಾಗಿರುವ High and Liner Accelerator, Dosimeter and Mould room ಉಪಕರಣಗಳನ್ನು ಖರೀದಿಸುವುದಕ್ಕೆ ಟೆಂಡರ್ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಕ್ಯಾನ್ಸರ್ ಆಸ್ಪತೆಯನು ಮೇಲ್ದರ್ಜೆಗೇರಿಸಲು ಎಲ್ಲಾ ಅವಶ್ಯಕ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ಎಂಇಡಿ 431 ಎಂಪಿಎಸ್ 2022

(ಡಾ: ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಇಲಾಖೆ ಸಚಿವರು.



Generated from eOffice by DR.K SUDHAKAR, MED-MIN(SK), MINISTER, MEDICAL EDUCATION SEC on 15/09/2022 07:22 PM